**MAY 30,2025**
**ALL INDIA RADIO- DHARWAD**
**PRADESH SAMACHARA (KANNADA) 12PM**

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

<><><>

**ಸಾರ್ವಜನಿಕರಿಗೆ ಸಮರ್ಪಕ** ಆರೋಗ್ಯ ಸೇವೆ ಒದಗಿಸುವ ನಿಟ್ಟಿನಲ್ಲಿ, ರಾಷ್ಟ್ರೀಯ ಆರೋಗ್ಯ ಮಿಶನ್ ಯೋಜನೆಯಡಿಯಲ್ಲಿ ನೇಮಕವಾಗುವ, ಗುತ್ತಿಗೆ ವೈದ್ಯರ ವೇತನವನ್ನು ಹೆಚ್ಚಿಸಿ, ಆದೇಶಿಸಲಾಗಿದೆ ಎಂದು ರಾಜ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಚಿವ ದಿನೇಶ ಗುಂಡೂರಾವ್ ತಿಳಿಸಿದ್ದಾರೆ. ಕೇಂದ್ರ ಸರ್ಕಾರದ ಅನುಮತಿ ಪಡೆದು, ಶೇಕಡ 25 ರಿಂದ 50 ರಷ್ಟು ವೇತನ ಹೆಚ್ಚಳ ಮಾಡಲಾಗಿದೆ. 45 ಸಾವಿರ ರೂಪಾಯಿ ಇದ್ದ MBBS ವೈದ್ಯರ ವೇತನವನ್ನು 75 ಸಾವಿರಕ್ಕೆ ಪರಿಷ್ಕರಿಸಲಾಗಿದೆ. ಪ್ರಸ್ತುತ 1,10,000 ರೂಪಾಯಿ ಪಡೆಯುತ್ತಿದ್ದ ತಜ್ಞ ವೈದ್ಯರ ವೇತನವನ್ನು 1,40,000 ಕ್ಕೆ ಏರಿಕೆ ಮಾಡಲಾಗಿದೆ. ದಾದಿಯರ ವೇತನವನ್ನು 18 ರಿಂದ 22 ಸಾವಿರಕ್ಕೆ ಹೆಚ್ಚಿಸಲಾಗಿದೆ ಎಂದು ಸಚಿವರು ತಮ್ಮ ಎಕ್ಸ್ ಖಾತೆ ಮೂಲಕ ತಿಳಿಸಿದ್ದಾರೆ.

<><><>

**ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು** ಸೇರಿದಂತೆ ವಿವಿಧೆಡೆಗಳಲ್ಲಿ ಕಳೆದ ಕೆಲ ದಿನಗಳಿಂದ ಭಾರೀ ಮಳೆಯಾಗುತ್ತಿದ್ದು, ಜನಜೀವನ ವ್ಯತ್ಯಯಗೊಂಡಿದೆ. ಉಳ್ಳಾ ತಾಲೂಕಿನಾದ್ಯಂತ ನೂರಕ್ಕೂ ಹೆಚ್ಚಿನ ಮನೆಗಳು ಜಲಾವೃತಗೊಂಡಿವೆ, ಮಂಜನಾಡಿ ಗ್ರಾಮದ ಮೊಂಟೆಪದವು ಕೊಪ್ಪಲ ಎಂಬಲ್ಲಿ ಮನೆ ಗೋಡೆ ಕುಸಿದು ಪ್ರೇಮ ಎಂಬವರು ಮೃತಪಟ್ಟಿದ್ದಾರೆ. ಗಂಭೀರ ಗಾಯಗೊಂಡ ಅವರ ಪತಿ ಕಾಂತಪ್ಪ ಪೂಜಾರಿ ಎಂಬವರನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ. ಓರ್ವ ಮಹಿಳೆ ಹಾಗೂ ಇಬ್ಬರು ಮಣ್ಣಿನಡಿ ಸಿಲುಕಿದ್ದು, ರಕ್ಷಣಾ ಕಾರ್ಯಾಚರಣೆ ಭರದಿಂದ ಸಾಗಿದೆ. ಕಡಲ್ಕೊರೆತದ ಹಿನ್ನೆಲೆ, ಕರಾವಳಿ ಅಂಚಿನಲ್ಲಿ ವಾಸಿಸುತ್ತಿರುವವರನ್ನು ಸುರಕ್ಷಿತ ಸ್ಥಳಕ್ಕೆ ಸ್ಥಳಾಂತರಿಸಲಾಗಿದೆ. ಈ ಬಗ್ಗೆ ಹೆಚ್ಚಿನ ಮಾಹಿತಿ ನೀಡಿದ್ದಾರೆ ನಮ್ಮ ಜಿಲ್ಲಾ ಪ್ರತಿನಿಧಿ...

<><><>

**ಧ್ವನಿ: ಸುರೇಶ ಪಳ್ಳಿ 37 ಸೆಕೆಂದುಗಳು**

<><><>

**ತೀವ್ರ ಮಳೆ** ಹಿನ್ನೆಲೆ ದಕ್ಷಿಣ ಕನ್ನಡ ಜಿಲ್ಲೆ ಅಂಗನವಾಡಿ, ಪ್ರಾಥಮಿಕ ಹಾಗೂ ಪ್ರೌಢಶಾಲೆಗಳಿಗೆ ಇಂದು ರಜೆ ಘೋಷಿಸಲಾಗಿದೆ.

<><><>

**ಉಡುಪಿ ಜಿಲ್ಲೆಯಾದ್ಯಂತ** ನಿರಂತರ ಮಳೆ ಆಗುತ್ತಿರುವ ಹಿನ್ನೆಲೆ ಇಂದು ಜಿಲ್ಲೆಯ, ಅಂಗನವಾಡಿ ಹಾಗೂ ಶಾಲೆಗಳಿಗೆ ಜಿಲ್ಲಾಧಿಕಾರಿ ವಿದ್ಯಾ ಕುಮಾರಿ.ಕೆ ಅವರು ರಜೆ ಘೋಷಿಸಿದ್ದಾರೆ. ಎಸ್ .ಎಸ್. ಎಲ್ .ಸಿ ಪೂರಕ ಪರೀಕ್ಷೆ ಎಂದಿನಂತೆ ನಡೆಯಲಿದೆ ಎಂದು ಅವರು ತಿಳಿಸಿದ್ದಾರೆ.

<><><>

**ರಾಜ್ಯದ ಕರಾವಳಿ, ಮಲೆನಾಡು ಸೇರಿದಂತೆ ಹಲವೆಡೆ** ಧಾರಾಕಾರ ಮಳೆಯಾಗುತ್ತಿದೆ. ಮನೆ, ರಸ್ತೆ ಹಾಗೂ ಸೇತುವೆಗಳು ಕುಸಿದಿವೆ, ಸರ್ಕಾರ ಜವಾಬ್ದಾರಿಯುತವಾಗಿ ವರ್ತಿಸಿ, ಜನರ ಸಮಸ್ಯೆಗಳಿಗೆ ಸ್ಪಂದಿಸಬೇಕು ಎಂದು ಕೇಂದ್ರ ಬೃಹತ್ ಕೈಗಾರಿಕೆ ಖಾತೆ ಸಚಿವರಾದ ಎಚ್.ಡಿ ಕುಮಾರಸ್ವಾಮಿ ತಮ್ಮ ಎಕ್ಸ್ ಖಾತೆ ಮೂಲಕ ಕೋರಿದ್ದಾರೆ.

<><><>

**ಸಾಹಿತಿ, ಕವಿ ಎಚ್.ಎಸ್ ವೆಂಕಟೇಶಮೂರ್ತಿ** ಇಂದು ನಿಧರಾದರು. ಅವರಿಗೆ 80 ವರ್ಷ ವಯಸ್ಸಾಗಿತ್ತು. ದಾವಣಗೆರೆ ಜಿಲ್ಲೆ ಚನ್ನಗಿರಿ ತಾಲೂಕಿನ ಹೊದಿಗೆರೆ ಗ್ರಾಮದವರಾದ ಎಚ್.ಎಸ್.ವೆಂಕಟೇಶ ಮೂರ್ತಿ ಅವರು 1973 ರಿಂದ 2000 ದವರೆಗೆ, ಬೆಂಗಳೂರಿನ ಸೇಂಟ್ ಜೋಸೆಫ್ ಕಾಲೇಜಿನಲ್ಲಿ ಅಧ್ಯಾಪಕರಾಗಿ ಸೇವೆ ಸಲ್ಲಿಸಿದ್ದರು. ಹಲವು ಪ್ರಶಸ್ತಿಗಳಿಗೆ ಭಾಜನರಾಗಿದ್ದ ಎಚ್.ಎಸ್ ವೆಂಕಟೇಶಮೂರ್ತಿ ಅವರ ನಿಧನಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಸೇರಿದಂತೆ ಗಣ್ಯರು ಕಂಬನಿ ಮಿಡಿದಿದ್ದು, ಸಂತಾಪ ಸೂಚಿಸಿದ್ದಾರೆ.

<><><>

**'ಕೃಷಿ ವಿಜ್ಞಾನಿಗಳ ನಡೆ, ರೈತರ ಕಡೆ' ಧ್ಯೇಯದೊಂದಿಗೆ,** 'ವಿಕಸಿತ ಕೃಷಿ ಸಂಕಲ್ಪ ರಾಷ್ಟ್ರೀಯ' ಅಭಿಯಾನಕ್ಕೆ ಗದಗ ಜಿಲ್ಲೆ, ಹುಲಕೋಟಿಯ ಕೆ.ಎಚ್ ಪಾಟೀಲ ಕೃಷಿ ವಿಜ್ಞಾನ ಕೇಂದ್ರದಲ್ಲಿ ಚಾಲನೆ ನೀಡಲಾಯಿತು. ಸಿಂಗಟರಾಯನಕೇರಿ, ನರೇಗಲ್ಲ, ಚಿಕ್ಕಮಣ್ಣೂರು, ಸವಡಿ ಹಾಗೂ ನಿಡಗುಂದಿಕೊಪ್ಪದಲ್ಲಿ ಮುಂಗಾರು ಹಂಗಾಮಿನ ಪೂರ್ವ ಸಿದ್ಧತೆ, ಬೀಜೋಪಚಾರ, ತೋಟಗಾರಿಕೆ ಬೆಳೆಗಳು, ಸಿರಿಧಾನ್ಯ ಹಾಗೂ ಅವುಗಳ ಮಹತ್ವ, ಕೃಷಿ ಯಂತ್ರೋಪಕರಣಗಳ ಬಗ್ಗೆ ರೈತರಿಗೆ ಮಾಹಿತಿ ನೀಡಲಾಯಿತು. ಜೂನ್ 12ರ ವರೆಗೆ, 15 ದಿನಗಳ ಕಾಲ, 'ವಿಕಸಿತ ಕೃಷಿ ಸಂಕಲ್ಪ ರಾಷ್ಟ್ರೀಯ ಅಭಿಯಾನ' ಆಯೋಜಿಸಲಾಗಿದೆ.

<><><>

**ಬೀದರ ಜಿಲ್ಲೆ ಬಸವಕಲ್ಯಾಣ** ನಗರಕ್ಕೆ ನೂತನ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ ಮಂಜೂರಾಗಿದೆ. ವಿಧಾನಪರಿಷತ್ ಮಾಜಿ ಸದಸ್ಯ ವಿಜಯ ಸಿಂಗ ಅವರ ಮನವಿಗೆ ಸ್ಪಂದಿಸಿರುವ ರಾಜ್ಯ ಸರ್ಕಾರ, ಬಸವಕಲ್ಯಾಣದಲ್ಲಿ ವಸತಿ ಶಾಲೆ ಪ್ರಾರಂಭಿಸಲು ಆಡಳಿತಾತ್ಮಕ ಮಂಜೂರಾತಿ ನೀಡಿ ಆದೇಶ ಹೊರಡಿಸಿದೆ.

<><><>

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**

<><><>

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ.**

<><><>